# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:13ನೇ ಫೆಬ್ರವರಿ, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಯು.ಬಿ. ವೆಂಕಟೇಶ್,** ಅವರು ಬೆಂಗಳೂರು ನಗರದ ಪ್ರತಿಷ್ಠಿತ ಲಾಲ್‌ಬಾಗ್‌ನ ಒಳಭಾಗದಲ್ಲಿ ಖಾಸಗಿ ಸಂಸ್ಥೆಗಳಿಗೆ ಸರ್ಕಾರಿ ಭೂಮಿಯನ್ನು ಗುತ್ತಿಗೆಗೆ ನೀಡಿರುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಶ್ರೀ ನರಸಿಂಹರಾಜ ಜಿಲ್ಲಾ ಆಸ್ಪತ್ರೆಯಲ್ಲಿ ಹಾಸಿಗೆಗಳ ಸಾಮರ್ಥ್ಯಕ್ಕೆ ತಕ್ಕಂತೆ ವೈದ್ಯರು, ಶುಶ್ರೂಷಾಧಿಕಾರಿಗಳು ಹಾಗೂ ಗ್ರೂಪ್ "ಡಿ" ಸಿಬ್ಬಂದಿಗಳನ್ನು ನೇಮಕ ಮಾಡದಿರುವುದರಿಂದ ಉದ್ಭವಿಸಿರುವ ಸಮಸ್ಯೆಯ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

೦3 **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರಾಶ್ರಿತರಿಗೆ ಪುನರ್ ವಸತಿ ಕಲ್ಪಿಸುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಪುಟ್ಟಣ್ಣ, ಎಸ್.ವ್ಹಿ. ಸಂಕನೂರ, ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ, ನಿರಾಣಿ ಹಣಮಂತ್ ರುದ್ರಪ್ಪ ಮತ್ತು ಮಧು ಜಿ. ಮಾದೇಗೌಡ** ಅವರುಗಳು 1986-87 ರಿಂದ 1994-95 ನೇ ಸಾಲಿನವರೆಗೆ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಎಲ್ಲಾ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ ಮತ್ತು ಕೆ.ಎ. ತಿಪ್ಪೇಸ್ವಾಮಿ** ಅವರುಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯವರು ನಡೆಸುತ್ತಿರುವ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ದತಾ ಪರೀಕ್ಷೆಗೆ ಪ್ರಸ್ತುತ ನಿಗದಿಪಡಿಸಿರುವ ಶುಲ್ಕದಿಂದಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವುದರಿಂದ ನಿಗದಿಪಡಿಸಿರುವ ಶುಲ್ಕವನ್ನು ಪುನರ್ ಪರಿಶೀಲಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಮಂಜುನಾಥ ಭಂಡಾರಿ** ಅವರು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆಯ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಕುರಿತು ಪ್ರಸ್ತಾಪಿಸುವುದು.

## 07.ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2023ನೇ ಫೆಬ್ರವರಿ, 10 ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಡಾ|| ತೇಜಸ್ವಿನಿಗೌಡ,** ಅವರು ಸೂಚಿಸುವುದು;

ಆ) **ಶ್ರೀ ಡಿ.ಎಸ್. ಅರುಣ್,** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**